ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ, ದಿನಾಂಕ: 18ನೇ ಜುಲೈ, 2019

ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆಗಳ ಕುರಿತು

ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-

297 (366) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2001 ರಿಂದ ಇಲ್ಲಿಯವರೆಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ ಎಷ್ಟು ಪತ್ರಾಂಕಿತ ಅಧಿಕಾರಿಗಳ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲಾಗಿದೆ ;

(ಆ) (HOTA) ಸಮಿತಿ ಶಿಫಾರಸ್ಸಿನಂತೆ ಲೋಕಸೇವಾ ಆಯೋಗ ಪ್ರತಿ ವರ್ಷ ಪರೀಕ್ಷೆ ನಡೆಸದಿರುವುದಕ್ಕೆ ಕಾರಣವೇನು ;

(ಇ) ಇದರಿಂದಾಗಿ ಅರ್ಹ ಪದವೀಧರರಿಗೆ ಸೂಕ್ತ ಅವಕಾಶ ಸಿಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಿವಿಧ ಇಲಾಖೆಗಳಲ್ಲಿರುವ ಖಾಲಿ ಹುದ್ದೆಗಳಿಂದಾಗಿ ಆಡಳಿತ ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ?